ಕರ್ನಾಟಕ ಸರ್ಕಾರ

ಸಂಖ್ಯೆ: ಸಾಉಇ 19 ಎಂಇಎ 2021

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಹಂತ, 7ನೇ ಮಹಡಿ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 27.01.2021.

ಇಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಾರ್ವಜನಿಕ ಉದ್ದಿಮೆಗಳ ಇಲಾಖೆ.

ಇವರಿಗೆ:
ವ್ಯವಸ್ಥಾಪಕ ನಿರ್ದೇಶಕರು,
ಎಲ್ಲಾ 60 ನಿಗಮ ಮಂಡಳಿಗಳು.

ಮಾನ್ಯರೇ,

ವಿಷಯ: ಹುತಾತ್ಮರ ದಿನಾಚಾರಣೆ ಬಗ್ಗೆ.

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ರಾಜಕೀಯ) ಇವರ ಅ.ಜ್ಞಾ ಸಂಖ್ಯೆ: ಸಿಆಸುಇ 01 ರಾರಾಆ 2021, ದಿನಾಂಕ: 19.01.2021.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಕೃತ ಜ್ಞಾಪನವನ್ನು ಲಗತ್ತಿಸಿದೆ. ಪ್ರತಿವರ್ಷದಂತೆ, ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಜನವರಿ 30ರಂದು ಪೂರ್ವಾಹ್ನ 11.00 ಗಂಟೆಗೆ ಮೌನ ಆಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಸ್ಥಾಯಿ ಸೂಚನೆಗಳನ್ನು ನೀಡಲಾಗಿದೆ. ಅದರಂತೆ ಸೂಚಿಸಿರುವ ನಿರ್ದೇಶನಗಳನ್ನು ತಕ್ಕುದಾದ ರೀತಿಯಲ್ಲಿ ಅನುಸರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಎಂ.ಗೋಪಾಲಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ(ಆಡಳಿತ)
ಸಾರ್ವಜನಿಕ ಉದ್ದಿಮೆಗಳ ಇಲಾಖೆ.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 01 ರಾರಾಆ 2021

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು,ದಿನಾಂಕ:19.01.2021.

# ಅಧಿಕೃತ ಜ್ಞಾಪನ

ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತ ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿವರ್ಷ ಜನವರಿ 30ರಂದು ಪೂರ್ವಾಹ್ನ 11.00 ಗಂಟೆಗೆ ಮೌನ ಆಚರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರತಿ ವರ್ಷವೂ ಸೂಚನೆಗಳನ್ನು ನೀಡಲಾಗುತ್ತಿದೆ. ಹುತಾತ್ಮರ ಸ್ಮರಣಾರ್ಥವಾಗಿ ಜನವರಿ 30ರಂದು ನಡೆಸುವ ಮೌನ ಆಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಸ್ಥಾಯಿ ಸೂಚನೆಗಳನ್ನು ನೀಡಲಾಗಿದೆ.

1. ಜನವರಿ 30 ರಂದು ಪೂರ್ವಾಹ್ನ 11.00 ಗಂಟೆಗೆ ರಾಜ್ಯದೆಲ್ಲೆಡೆ 2 ನಿಮಿಷಗಳ ಕಾಲ ಮೌನ ಆಚರಿಸುವುದು.
2. ಎಲ್ಲಿ ಸೈರನ್ ಗಳು ಅಥವಾ ಸೈನಿಕರ ಬಂದೂಕುಗಳು ಲಭ್ಯವಿವೆಯೋ ಅಂತಹ ಕಡೆ ಎರಡು ನಿಮಿಷಗಳು ಮೌನ ಆಚರಣೆಯ ಕಾಲವನ್ನು ಪ್ರಾರಂಭ ಮತ್ತು ಮುಕ್ತಾಯಕ್ಕೆ ಸೈರನ್ ಅಥವಾ ಸೈನಿಕರ ಬಂದೂಕುಗಳ ಶಬ್ಧದ ಮೂಲಕ ಎರಡು ನಿಮಿಷ ಮೌನ ಆಚರಣೆ ಪೂರ್ವಾಹ್ನ 10.58 ರಿಂದ 11.00 ಗಂಟೆಯವರೆಗೆ ಸೈರನ್ ಬಂದೂಕು ಶಬ್ಧ ಮಾಡಿಸುವುದು ಹಾಗೂ ಎರಡು ನಿಮಿಷದ ಮೌನ ಆಚರಣೆಯ ನಂತರ ಪುನ: 11.02 ರಿಂದ 11.03 ನಿಮಿಷದವರೆಗೆ ಸೈರನ್/ಬಂದೂಕು ಶಬ್ಧವನ್ನು ಮಾಡಿಸುವುದು. ಈ ಪದ್ಧತಿಯನ್ನು ಸೈರನ್/ಬಂದೂಕು ಸೌಲಭ್ಯವಿರುವ ಕಡೆ ಅಳವಡಿಸಿಕೊಳ್ಳುವುದು.
3. ಸಾಧ್ಯವಾಗುವಂತಹ ಸಂದರ್ಭದಲ್ಲಿ ಎಲ್ಲರೂ ಒಂದೆಡೆ ಸೇರಿ ಮೌನವನ್ನು ಆಚರಿಸಬೇಕು. ಆದಾಗ್ಯೂ ಇದು ಕೆಲಸ ಕಾರ್ಯಗಳಿಗೆ ತೀವ್ರ ತೊಂದರೆ ಆಗುವಂತಿದ್ದರೆ ಮೇಲೆ ತಿಳಿಸಿದಂತೆ ಒಂದೇ ಸ್ಥಳದಲ್ಲಿ ಸೇರಲು ಪ್ರಯತ್ನಸದೇ ಇರಬಹುದು.
4. ಸಂಕೇತ (Signal) ವ್ಯವಸ್ಥೆ ಇರದಂತಹ ಪ್ರದೇಶದಲ್ಲಿ, ಬೆಳಗ್ಗೆ 11.00 ಗಂಟೆಗೆ 2 ನಿಮಿಷಗಳ ಮೌನ ಆಚರಿಸಲು ಸಂಬಂಧಪಟ್ಟವರಿಗೆಲ್ಲ ಸೂಕ್ತ ನಿರ್ದೇಶನವನ್ನು ಕಳುಹಿಸುವುದು.

2] ಹುತಾತ್ಮರ ದಿನಾಚರಣೆಯನ್ನು ತಪ್ಪದೇ ಆಚರಿಸಬೇಕಾಗಿರುವುದರಿಂದ, ಈ ಉದ್ದೇಶಕ್ಕಾಗಿ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಲಾಗಿದೆ.

- ಹುತಾತ್ಮರ ದಿನವನ್ನು ಪೂರ್ಣ ಪಾವಿತ್ರತೆ ಮತ್ತು ಯೋಗ್ಯವಾದ (befitting) ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಸೂಚನೆಗಳನ್ನು ನೀಡುವುದು. ಈ ದಿನದ ವಿಶೇಷತ್ವಕ್ಕೆ ಸಂಬಂಧಿಸಿದಂತೆ ಭಾಷಣಗಳನ್ನು, ಅದರಲ್ಲೂ ವಿಶೇಷವಾಗಿ ಭಾರತದ ಸ್ವಾತಂತ್ರ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವನ್ನು ತಿಳಿಸುವಂತಹ ಭಾಷಣ/ಚರ್ಚೆಗಳನ್ನು ಏರ್ಪಡಿಸಬೇಕು. ಈ ಭಾಷಣಗಳ ಮುಖ್ಯಾಂಶಗಳಲ್ಲಿ ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸುವುದು, ಸಂರಕ್ಷಿಸುವುದು ಮತ್ತು ಶ್ರೀಮಂತಗೊಳಿಸುವುದಲ್ಲದೆ ರಾಷ್ಟ್ರದ ಐಕ್ಯತೆಯನ್ನು ಉತ್ತೇಜಿಸುವುದು ಮತ್ತು ಒಂದೇ ಗುರಿಗಳು ಮತ್ತು ಆದರ್ಶಗಳಿಗೆ ಬದ್ಧರಾಗುವ ಅಂಶಗಳನ್ನೊಳಗೊಂಡಿರಬೇಕು.
- ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದವರ ಪಾತ್ರ ಮತ್ತು ರಾಷ್ಟ್ರೀಯ ಐಕ್ಯತೆಯ (National Integration) ಮೂಲ ಉದ್ದೇಶಗಳು ಇರುವ ಸಾಂಸ್ಕೃತಿಕ ಕಾರ್ಯಕ್ರಮಗಳ/ಡಾಕ್ಯುಮೆಂಟರಿ ಚಿತ್ರ ಪ್ರದರ್ಶನಗಳ ಏರ್ಪಾಡುಗಳನ್ನು ರಾಜ್ಯದ ಪ್ರಚಾರ ಘಟಕಗಳು ಮಾಡಬಹುದು.

3] ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಎಲ್ಲಾ ಪ್ರಾದೇಶಿಕ ಆಯುಕ್ತರು, ಇಲಾಖಾ ಮುಖ್ಯಸ್ಥರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತಿತರೆ ಸಂಬಂಧಪಟ್ಟ ಅಧಿಕಾರಿಗಳು ಮೇಲೆ ಸೂಚಿಸಿರುವ ನಿರ್ದೇಶನಗಳನ್ನು ತಕ್ಕುದಾದ ರೀತಿಯಲ್ಲಿ ಅನುಸರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೋರಲಾಗಿದೆ.

V. Akkamahadevi 19/01/2021

[ವಿ. ಅಕ್ಕಮಹಾದೇವಿ]

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)

ಸಿಆಸುಇ (ರಾಜಕೀಯ)

**ಮೆಮೋ**

**ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/20-21/** Cys-1493 **ದಿನಾಂಕ:** 29 JAN 2021

ಸರ್ಕಾರದ ಅಧೀನ ಕಾರ್ಯದರ್ಶಿ(ಆಡಳಿತ), ಸಾರ್ವಜನಿಕ ಉದ್ದಿಮೆಗಳ ಇಲಾಖೆ, ಬೆಂಗಳೂರುರವರ ಪತ್ರ ಸಂಖ್ಯೆ:ಸಾಉಇ 19 ಎಂಇಎ 2021 ದಿನಾಂಕ:27.01.2021 ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ), ಸಿಆಸುಇ(ರಾಜಕೀಯ), ಬೆಂಗಳೂರುರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ:ಸಿಆಸುಇ 01 ರಾರಾಆ 2021 ದಿನಾಂಕ:19.01.2021ನ್ನು ಯಥಾವತ್ತಾಗಿ ಚಾವಿಸನಿನಿಯಲ್ಲಿ ಅಳವಡಿಸಿಕೊಳ್ಳಲಾಗಿದೆ.

29/1/21

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)

ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರುರವರ ಮಾಹಿತಿಗಾಗಿ.
- ಮುಖ್ಯ ಇಂಜಿನಿಯರ್(ವಿ), ಮೈಸೂರು ವಲಯ, ಚಾವಿಸನಿನಿ, ಮೈಸೂರು/ಹಾಸನರವರ ಮಾಹಿತಿಗಾಗಿ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿರವರ ಮಾಹಿತಿಗಾಗಿ.

**ಮು.ತಿ.ನೋ.**

- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.